ಅ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಇ) ನಾಲೆಯ ರಿಪೇರಿಯನ್ನು 1999-2000ನೇ ಸಾಲಿನಲ್ಲಿ ಮಾಡಲಾಗಿದೆಯೇ?

ಈ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಎಚ್.ಕೆ. ಪಾಟೀಲ್ (ಬೃಹತ್ ಮತ್ತು ಮಧ್ಯಮ ನೀರಾವರಿ ಮಂತ್ರಿಗಳು) :

ಅ) ಇಲ್ಲ.

ಆ) 1999-2000ನೇ ಸಾಲಿನಲ್ಲಿ ಹೂಳು ತೆಗೆಯುವ ಕಾಮಗಾರಿಯನ್ನು ಲೆಕ್ಕ ಶೀರ್ಷಿಕೆ 2701 ಗೊಂದಿ (ನಿರ್ವಹಣೆ) ಅಡಿಯಲ್ಲಿ ಕೈಗೊಳ್ಳಬೇಕಾಗಿದ್ದು, ರೂ. 7 ಲಕ್ಷಗಳು ಅನುದಾನ ಬಿಡುಗಡೆಯಾಗಿರುತ್ತದೆ. ದಿ. 31.3.99ರ ಅಂತ್ಯಕ್ಕೆ ಸದರಿ ಲೆಕ್ಕ ಶೀರ್ಷಿಕೆಯಲ್ಲಿ ರೂ. 7.63 ಲಕ್ಷಗಳಷ್ಟು ಬಿಲ್ಲುಗಳು ಪಾವತಿಯಾಗಬೇಕಾಗಿರುತ್ತದೆ. ಈ ಕಾರಣದಿಂದ ಬಿಡುಗಡೆಯಾದ ಅನುದಾನಕ್ಕಿಂತ ಬಾಕಿ ಬಿಲ್ಲುಗಳ ಮೊತ್ತ ಹೆಚ್ಚಾಗಿರುವುದರಿಂದ, ಹೂಳು ತೆಗೆಯುವ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ.

ಇ) 1999-2000ನೇ ಸಾಲಿನಲ್ಲಿ ನೀರು ಸಮರ್ಪಕ ನಿರ್ವಹಣೆ ಕುರಿತಂತೆ ಅಗತ್ಯ ಕಾಮಗಾರಿಗಳನ್ನು ರೂ. 29.59 ಲಕ್ಷಗಳಿಗೆ ಕೈಗೊಳ್ಳಲಾಗಿದೆ.

ಈ) ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಸವದತ್ತಿ ತಾಲ್ಲೂಕಿನ ಮುರುಗೋಡ ಗ್ರಾಮದ 33 ಕೆ.ವಿ. ಸ್ಟೇಷನ್ ಕೆಲಸ ಪ್ರಾರಂಭ

3243 - ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದಲ್ಲಿ 33 ಕೆ.ವಿ. ಸ್ಟೇಷನ್ ಕೆಲಸ ತೆಗೆದುಕೊಳ್ಳಲು ಎಂದು ಮಂಜೂರಾತಿ ನೀಡಲಾಗಿದೆ ಮತ್ತು ಎಷ್ಟು ಮೊತ್ತಕ್ಕೆ ಮಂಜೂರಾತಿ ನೀಡಲಾಗಿದೆ?

ಆ) ಈ ಕೆಲಸಕ್ಕೆ ಈಗಾಗಲೇ ಜಮೀನು ವಶಪಡಿಸಿಕೊಳ್ಳಲಾಗಿದೆ ಎಂಬ ಸಂಗತಿ ನಿಜವೆ?

ಇ) ಸರ್ಕಾರ ಈ ಕೆಲಸಕ್ಕೆ ಮಂಜೂರಾತಿಯನ್ನು ನೀಡಿದ್ದರೂ ಹಾಗೂ ಜಮೀನು ವಶಪಡಿಸಿಕೊಳ್ಳಲಾಗಿದ್ದರೂ ಸಹ ಈ ಕೆಲಸ ಪ್ರಾರಂಭವಾಗದೇ ಇರುವ ಸಂಗತಿ ನಿಜವೇ?

ಈ) ಹಾಗಿದ್ದಲ್ಲಿ ಈ ಕೆಲಸ ಎಂದಿನಿಂದ ಪ್ರಾರಂಭಿಸಲಾಗುವುದು ಹಾಗೂ ಎಂದು ಪೂರ್ಣಗೊಳಿಸಲಾಗುವುದು?

ಶ್ರೀ ವೀರಕುಮಾರ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಬೆಳಗಾಂ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದಲ್ಲಿ 33 ಕೆ.ವಿ. ವಿದ್ಯುತ್

ಉಪಕೇಂದ್ರವನ್ನು ಸ್ಥಾಪಿಸಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಜನವರಿ 1999ರಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿದ್ದು, ಈ ಕಾಮಗಾರಿಯ ಅಂದಾಜು ವೆಚ್ಚ 168 ಲಕ್ಷ ರೂಪಾಯಿಗಳು.

ಆ) ಹೌದು. ಈ ಕೆಲಸಕ್ಕಾಗಿ ಬೇಕಾಗುವ ಜಮೀನನ್ನು ಕಂದಾಯ ಇಲಾಖೆಯಿಂದ ಸ್ವಾಧೀನಪಡಿಸಿಕೊಳ್ಳಲಾಗಿದೆ.

ಇ) ಈ ಉದ್ದೇಶಿತ ವಿದ್ಯುತ್ ಉಪಕೇಂದ್ರವನ್ನು 'ಟರ್ನ್ ಕೀ' ಆಧಾರದ ಮೇಲೆ ನಿರ್ಮಾಣ ಮಾಡಬೇಕೆಂದು ಮೊದಲು ನಿಗಮವು ನಿರ್ಧರಿಸಿತ್ತು. ಈಗ ಈ ವಿದ್ಯುತ್ ಉಪಕೇಂದ್ರವು ನಿಗಮದ ವತಿಯಿಂದಲೇ ಗುತ್ತಿಗೆ ಆಧಾರದ ಮೇಲೆ (ಲೇಬರ್ ಕಂಟ್ರಾಕ್ಟ್) ನಿರ್ವಹಿಸಲು ನಿರ್ಧರಿಸಲಾಗಿದೆ. ನಿರ್ಮಾಣ ಕಾರ್ಯವನ್ನು ಪ್ರಾರಂಭಿಸುವ ಬಗ್ಗೆ ಪೂರ್ವಭಾವೀ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ.

ಈ) ಈ ಕೇಂದ್ರಕ್ಕಾಗಿ ಬೇಕಾಗುವ ಪೂರ್ವಭಾವೀ ಕೆಲಸಗಳಾದ ಸಾಮಗ್ರಿ ಸಲಕರಣೆ ಉಪಕರಣಗಳನ್ನು ಪೂರೈಸಲು ಕ್ರಮ ತೆಗೆದುಕೊಳ್ಳಲಾಗಿದ್ದು, ಕೆಲಸವನ್ನು ಆದಷ್ಟು ಜಾಗ್ರತೆ ಪ್ರಾರಂಭಿಸಿ ಜೂನ್ - 2001ರ ಅಂತ್ಯದ ವೇಳೆಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಲು ಗುರಿಯನ್ನು ಹೊಂದಲಾಗಿದೆ.

ರೈತರ ಪಂಪ್ ಸೆಟ್‌ಗಳಿಗೆ ಮೀಟರ್ ಅಳವಡಿಕೆ

3244 - ಶ್ರೀ ಕೌಜಲಗಿ ಮಹಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ರೈತರ 10 ಹೆಚ್.ಪಿ. ಒಳಗಿರುವ ಪಂಪ್ ಸೆಟ್‌ಗಳಿಗೆ ಈಗ ಮೀಟರ್ ಇಲ್ಲದೆ ಇರುವ ಸಂಗತಿ ನಿಜವೇ?*

ಆ) *ಇನ್ನು ಮುಂದೆ 10 ಹೆಚ್.ಪಿ. ಒಳಗಿರುವ ಪಂಪ್ ಸೆಟ್‌ಗಳಿಗೆ ಮೀಟರನ್ನು ಅಳವಡಿಸಬೇಕೆಂದು ಸರ್ಕಾರ ನಿರ್ಣಯ ತೆಗೆದುಕೊಂಡಿರುವುದು ನಿಜವೇ?*

ಶ್ರೀ ವೀರಕುಮಾರ ಪಾಟೀಲ್ (ಇಂಧನ ರಾಜ್ಯ ಸಚಿವರು) :

ಅ) ಈ ಹಿಂದೆ 10 ಹೆಚ್.ಪಿ. ಗಿಂತ ಕಡಿಮೆ ಇರುವ ನೀರಾವರಿ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸದೆ ವಿದ್ಯುತ್ ನೀಡುವ ಸೌಲಭ್ಯವಿದ್ದ ಕಾರಣ ಈಗಲೂ ಹಲವಾರು ಅಂತಹ ನೀರಾವರಿ ಪಂಪ್‌ಸೆಟ್‌ಗಳಿಗೆ ಮೀಟರ್ ಇಲ್ಲದಿರುವುದು ನಿಜ ಸಂಗತಿಯಾಗಿರುತ್ತದೆ.

ಆ) ಹೌದು, 21.6.2000ರ ಸರ್ಕಾರಿ ಆದೇಶದಲ್ಲಿ ಎಲ್ಲಾ ವಿದ್ಯುತ್ ಜೋಡಣೆಗಳಿಗೆ ಮೀಟರುಗಳನ್ನು ಅಳವಡಿಸುವಂತೆ ನಿರ್ದೇಶನ ನೀಡಿದೆ.